ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 6–12–2019**

**<u>ಪತ್ರಿಕಾ ಆಮಂತ್ರಣ</u>**

**1. ಕನ್ನಡ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಹೊರರಾಜ್ಯಗಳ ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2019–20 ನೇ ಸಾಲಿನ ವಿದ್ಯಾರ್ಥಿ ವೇತನ ವಿತರಣಾ ಸಮಾರಂಭ.**

**<u>ಉದ್ಘಾಟನೆ:</u>**

**ಡಾ. ಸಿ.ಎನ್. ಅಶ್ವತ್‌ನಾರಾಯಣ,**
**ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**<u>ವಿದ್ಯಾರ್ಥಿ ವೇತನ ವಿತರಣೆ:</u>**

**ಸಿ. ಟಿ. ರವಿ,**
**ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು,**

**<u>ಅಧ್ಯಕ್ಷತೆ:</u>**

**ಟಿ.ಎಸ್. ನಾಗಾಭರಣ,**
**ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.**

**<u>ಮುಖ್ಯ ಅತಿಥಿಗಳು</u>**

**ಹೆಚ್.ಎಸ್. ವೆಂಕಟೇಶಮೂರ್ತಿ**
**ಹೆಸರಾಂತ ಕವಿಗಳು**

**<u>ಪ್ರಾಸ್ತಾವಿಕ ನುಡಿ:</u>**

**ಡಾ. ಕೆ. ಮುರಳೀಧರ,**
**ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ.**

**ದಿನಾಂಕ: 07–12–2019, ಶನಿವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ**

**ಸ್ಥಳ: ಬಾಪು ಸಭಾಂಗಣ, ಗಾಂಧಿ ಭವನ ಕುಮಾರ ಪಾರ್ಕ್ ರಸ್ತೆ, ಬೆಂಗಳೂರು.**

**2. ಪ್ರವಾಸೋದ್ಯಮ ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಕ್ಕರೆ ಸಚಿವರಾಗಿ ಸಿ. ಟಿ. ರವಿ ಅವರು 100 ದಿನಗಳು ಪೂರೈಸಿರುವ ಹಿನ್ನೆಲೆಯಲ್ಲಿ ಕಳೆದ 100 ದಿನಗಳ ಕಾರ್ಯಚಟುವಟಿಕೆಗಳ ಪ್ರಗತಿಯ ಬಗ್ಗೆ ಕಿರು ಪುಸ್ತಕ ಬಿಡುಗಡೆ ಸಮಾರಂಭ :**

**ದಿನಾಂಕ : 07-12-2019 ಶನಿವಾರ ಸಮಯ : 12-30 ಗಂಟೆಗೆ**
**ಸ್ಥಳ : ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು**

**ಪತ್ರಿಕಾ ಪ್ರಕಟಣೆ**

## 12ನೇ ಅಖಿಲ ಕರ್ನಾಟಕ ಕನ್ನಡ ವಿಜ್ಞಾನ ಸಮ್ಮೇಳನ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಜನಪ್ರಿಯಗೊಳಿಸುವ ಮತ್ತು ವೈಜ್ಞಾನಿಕ ಮನೋಭಾವ ಮೂಡಿಸುವ ಉದ್ದೇಶದಿಂದ ದಿನಾಂಕ 13, 14, ಮತ್ತು 15 ಡಿಸೆಂಬರ್ 2019 ಗಳಂದು 12ನೇ ಅಖಿಲ ಕರ್ನಾಟಕ ಕನ್ನಡ ವಿಜ್ಞಾನ ಸಮ್ಮೇಳನವನ್ನು ಗುಲ್ಬರ್ಗಾ ವಿಶ್ವವಿದ್ಯಾಲಯದ ಡಾ. ಬಿ. ಆರ್. ಅಂಬೇಡ್ಕರ್ ಭವನ, ಕಲಬುರಗಿ ಇಲ್ಲಿ ಆಯೋಜಿಸಲಾಗಿದೆ ಎಂದು ಕರಾವಿಪ ಗೌರವ ಕಾರ್ಯದರ್ಶಿ ಗಿರೀಶ ಕಡ್ಲೇವಾಡ ತಿಳಿಸಿದ್ದಾರೆ.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಕಲಬುರಗಿ, ಕರಾವಿಪ-ಕಲಬುರಗಿ ಜಿಲ್ಲಾ ಸಮಿತಿ ಹಾಗೂ ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ಇವರ ಸಹಯೋಗದೊಂದಿಗೆ, ಮೂರು ದಿನಗಳ ಜರುಗುತ್ತಿರುವ ಈ ಸಮ್ಮೇಳನದಲ್ಲಿ ವಿಜ್ಞಾನಿಗಳು, ತಂತ್ರಜ್ಞರು, ವಿಜ್ಞಾನ ಸಂವಹನಕಾರರು, ಕೃಷಿತಜ್ಞರು, ಶಿಕ್ಷಕರು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ವಿಜ್ಞಾನಾಸಕ್ತರೂ ಸೇರಿ ವಿಚಾರ ವಿನಿಮಯ ಕೈಗೊಳ್ಳುವ ವೇದಿಕೆ ಇದಾಗಲಿದೆ.

ವಿಜ್ಞಾನ ಸಮ್ಮೇಳನದಲ್ಲಿ "ವಾಯುಗುಣ ವೈಪರೀತ್ಯ - ಭೂಕುಸಿತ, ನೆರ ಹಾವಳಿ, ವಿಜ್ಞಾನ ಮತ್ತು ನಂಬಿಕೆ, ವಿಜ್ಞಾನ ಬೋಧನೆಯಲ್ಲಿ ತುರ್ತಾಗಿ ಆಗಬೇಕಾದ ಬದಲಾವಣೆ, ವಿಜ್ಞಾನದ ಸಮಾಜೀಕರಣ ಮತ್ತು ಇತಿಹಾಸ, ಬಾಹ್ಯಾಕಾಶದ ಸಾಧನೆಗಳು, ಪ್ರಸ್ತುತ ಸನ್ನಿವೇಶದಲ್ಲಿ ಕೃಷಿ, ತಂತ್ರಜ್ಞಾನದ ಪ್ರಶಸ್ತ ಬಳಕೆ, ಮಹಿಳೆ ಮತ್ತು ವಿಜ್ಞಾನ" ವಿಷಯಗಳ ಕುರಿತು ಗೋಷ್ಠಿಗಳು ನಡೆಯಲಿವೆ. ಪ್ರಸ್ತುತ ಸಮ್ಮೇಳನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಅಂದಾಜು 1000 ವಿಜ್ಞಾನಾಸಕ್ತರು ಭಾಗವಹಿಸಲಿದ್ದಾರೆ.

ಸಮ್ಮೇಳನದಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಸ್ಥಳೀಯ ಕಾರ್ಯಕಾರಿ ಸಮಿತಿ ಸದಸ್ಯರು, ಆಯಾ ಜಿಲ್ಲೆಯ ಜಿಲ್ಲಾ ಸಮಿತಿ ಅಥವಾ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕೇಂದ್ರ ಕಚೇರಿಯನ್ನು ಸಂಪರ್ಕಿಸಬಹುದು. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು : ವಿಜ್ಞಾನಭವನ, ನಂ.24/2, 21ನೇ ಮುಖ್ಯರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು – 560 070 ದೂ : 080–26718939 ಮೊ : 9483549159 ಇ–ಮೇಲ್ : krvp.info@gmail.com ವೆಬ್‌ಸೈಟ್ : www.krvp.org

## ಸಚಿವರ ಪ್ರವಾಸ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಕಂದಾಯ ಮತ್ತು ಪೌರಾಡಳಿತ ಸಚಿವ ಶ್ರೀ ಆರ್. ಅಶೋಕ್ ಅವರು ಡಿಸೆಂಬರ್ 8 ರಂದು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ಸಂಜೆ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

2019–20 ನೇ ಸಾಲಿನಲ್ಲಿ ಕರ್ನಾಟಕ ಸಂಗೀಗ ನೃತ್ಯ ಅಕಾಡೆಮಿಯಿಂದ ಶಿಷ್ಯವೇತನಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕ ಸಂಗೀತ, ಹಿಂದುಸ್ತಾನಿ, ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಮತ್ತು ಗಮಕ – ಈ ಆರು ಕಲಾಕ್ಷೇತ್ರಗಳಲ್ಲಿ ಅಭ್ಯಾಸಿಸುತ್ತಿರುವ 16 ರಿಂದ 24 ವರ್ಷ ವಯೋಮಾನದ ಒಳಗಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ 10,000/- ಗಳನ್ನು ಶಿಷ್ಯವೇತನಗಿ ನೀಡಲಾಗುವುದು. ಅರ್ಜಿಗಳನ್ನು ಅಕಾಡೆಮಿಯ ಕಚೇರಿ ವೇಳೆಯಲ್ಲಿ (ಬೆಳಗ್ಗೆ 10.00 ರಿಂದ ಸಂಜೆ 5.30 ಗಂಟೆವರೆಗೆ) ಉಚಿತವಾಗಿ ಪಡೆಯಬಹುದು. ಅಲ್ಲದೆ ಅಕಾಡೆಮಿ ಅಂತರ್ಜಾಲ ತಾಣ www.karnatakasangeetanrityaacademy.com ಮೂಲಕ ಪಡೆದು ಸಲ್ಲಿಸಬಹುದಾಗಿದೆ. ನಿರ್ದೇಶಕರ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹದಾಗಿದೆ. ಅರ್ಜಿಯ ಜೊತೆ ಇತ್ತೀಚಿನ ಪಠ್ಯಕ್ರಮವನ್ನು ಸಹ ನೀಡಲಾಗಿದೆ. ಅಂಚೆ ಮೂಲಕ ಅರ್ಜಿ ಮತ್ತು ಪಠ್ಯಕ್ರಮ ಪಡೆಯಲಿಚ್ಛಿಸುವವರು ರೂ 10–00 (ರೂಪಾಯಿ ಹತ್ತುಗಳು ಮಾತ್ರ) ಸ್ಟಾಂಪ್ ಹಚ್ಚಿದ ಸ್ವವಿಳಾಸವುಳ್ಳ ಲಕೋಟೆಯನ್ನು ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇಲ್ಲಿಗೆ ಕಳುಹಿಸಿಕೊಡಬೇಕಾಗಿ ಕೋರಿದೆ. ಭರ್ತಿಮಾಡಿದ ಅರ್ಜಿಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಲು

ಕೊನೆಯ ದಿನಾಂಕ: 20–12–2019 ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

## ರಾಜ್ಯದ 275 ಸ್ಥಳೀಯ ಸಂಸ್ಥೆಗಳ ಹಾಗೂ ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ 7 ವಲಯ ಪಟ್ಟಣ ವ್ಯಾಪಾರ ಸಮಿತಿ ಸದ್ಯಸರ ಆಯ್ಕೆಗಾಗಿ ಚುನಾವಣೆ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ಬೀದಿ ಬೀದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು 2019 ರನ್ವಯ ಪಟ್ಟಣ ವ್ಯಾಪಾರ ಸಮಿತಿಗೆ ಚುನಾವಣೆ ನಡೆಸಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಹಾಗೂ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು ಅವರುಗಳಿಂದ ಸ್ವೀಕೃತವಾಗಿರುವ ವರದಿಯನ್ವಯ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು 2019 ರ ನಿಯಮ 5(2) 6(2) ಹಾಗೂ ಅನುಸೂಚಿ (4) ರಲ್ಲಿನ ದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯದ 275 ಸ್ಥಳೀಯ ಸಂಸ್ಥೆಗಳ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 7 ವಲಯಗಳ ಪಟ್ಟಣ ವ್ಯಾಪಾರ ಸಮಿತಿಗೆ ಸದಸ್ಯರನ್ನು (ಪ್ರತಿನಿಧಿಗಳ) ಆಯ್ಕೆ ಮಾಡುವ ಸಲುವಾಗಿ ಅವುಗಳ ಮುಂದೆ ತಿಳಿಸಿರುವ ಸ್ಥಳಗಳಲ್ಲಿ ದಿನಾಂಕ: 21–12–2019 ರಂದು (ಸಮಯ ಬೆಳಿಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ) ಚುನಾವಣೆಯನ್ನು ನಡೆಸಲು ಆದೇಶಿಸಿದೆ.

ನಾಮಪತ್ರಗಳನ್ನು ಸಲ್ಲಿಸಲು ನಿಗಧಿಪಡಿಸಿದ ಅವಧಿ – 09–12–2019 ರಿಂದ 13–12–2019 ರವರೆಗೆ ಸಮಯ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ.

ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ: 14–12–2019ರ ಬೆಳಿಗ್ಗೆ 11.00 ಗಂಟೆಯಿಂದ. ಸಿಂಧುವಾದ ನಾಮಪತ್ರಗಳನ್ನು ಪ್ರಟಿಸಬೇಕಾದ ದಿನಾಂಕ: 14–12–2019 ರಂದು ಮಧ್ಯಾಹ್ನ 3–00 ಗಂಟೆಗೆ.

ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ: 15–12–2019 ಸಂಜೆ 5.00 ಗಂಟೆಗಿಂತ ಮುಂಚೆ. ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ 15–12–2019 ರಂದು ಸಂಜೆ 5.30 ಗಂಟೆಗೆ.

ಅಗತ್ಯಬಿದ್ದಲ್ಲಿ ಮತದಾನ ನಡೆಯುವ ದಿನಾಂಕ, ಸ್ಥಳ ಮತ್ತು ಮತದಾನದ ಸಮಯ 21–12–2019 ಸಮಯ ಬೆಳಿಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ. ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸಿ, ಚುನಾವಣೆ ಫಲಿತಾಂಶ ಪ್ರಕಟಣೆ ದಿನಾಂಕ: 21.12.2019.

## ಕನ್ನಡ ರಾಜ್ಯೋತ್ಸವ ಆಚರಣೆ ಅಂಗವಾಗಿ ಬಾಲಭವನದಲ್ಲಿ ಮಕ್ಕಳಿಗಾಗಿ ವಿವಿಧ ಸ್ಪರ್ಧೆ ಹಾಗೂ ಕಾರ್ಯಕ್ರಮ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಬಾಲ ಭವನವು 2019 ನೇ ಸಾಲಿನ ಕನ್ನಡ ರಾಜ್ಯೋತ್ಸವ ಆಚರಣೆಯ ಅಂಗವಾಗಿ, ದಿನಾಂಕ: 15-12-2019 ರಂದು 05-16 ರ್ಷದ ಮಕ್ಕಳಿಗಾಗಿ ವಿವಿಧ ಸ್ಪರ್ಧೆ ಹಾಗೂ ಕಾರ್ಯಕ್ರಮಗಳನ್ನು ಬಾಲಭವನ, ಉದ್ಯಾನವನ, ಬೆಂಗಳೂರು ಇಲ್ಲಿ ಹಮ್ಮಿಕೊಂಡಿದೆ.

ಅಂದು ಬೆಳಿಗ್ಗೆ 10.30 ಗಂಟೆಗೆ 5 ರಿಂದ 16 ವರ್ಷದವರಿಗಾಗಿ ಕನ್ನಡ ಗೀತೆಗಳ ಗಾಯನ ಸ್ಪರ್ಧೆ ಏರ್ಪಡಿಸಲಾಗಿದೆ. ಇದರಲ್ಲಿ ಕನ್ನಡ ನಾಡಿನ ಹೆಸರಾಂತ ಕವಿಗಳ/ಸಾಹಿತಿಗಳಿಂದ ರಚಿಸಲ್ಪಟ್ಟ ಕನ್ನಡ ನಾಡಿಗೆ ಸಂಬಂಧಿಸಿದ ಸುಗಮ ಸಂಗೀತ ಹಾಗೂ ಸಿನಿಮಾ ಗೀತೆಗಳನ್ನು ಹಾಡಲು ಅವಕಾಶ ಕಲ್ಪಿಸಿದೆ. ಮೇಲಿನ ಸ್ಪರ್ಧೆಯಲ್ಲಿ ಭಾಗವಹಿಸುವ ಮಕ್ಕಳು ಅರ್ಧ ಗಂಟೆ ಮುಂಚಿತವಾಗಿ ಹಾಜರಾಗಿರಬೇಕು.

ವಿಜೇತ ಮಕ್ಕಳಿಗೆ ಬಹುಮಾನ ಹಾಗೂ ಭಾಗವಹಿಸಿದ ಎಲ್ಲ ಮಕ್ಕಳಿಗೂ ಪ್ರಮಾಣ ಪತ್ರ ವಿತರಣೆ ಮಧ್ಯಾಹ್ನ 2.30 ಗಂಟೆಗೆ. ಸಾಂಸ್ಕೃತಿಕ ಕಾರ್ಯಕ್ರಮ ಸಂಜೆ 3.30 ಗಂಟೆಗೆ.

ಸ್ಪರ್ಧೆಗಳಲ್ಲಿ ಭಾಗವಹಿಸುವ ಆಸಕ್ತ ಮಕ್ಕಳು ದಿನಾಂಕ: 14-12-2019 ರ ಒಳಗೆ ವಿವರಗಳನ್ನು ಕಚೇರಿ ವೇಳೆಯಲ್ಲಿ ನೋಂದಾಯಿಸಲು ಕೋರಿದೆ. (ರಜಾ ದಿನಗಳನ್ನು ಹೊರತುಪಡಿಸಿ)

ಹೆಚ್ಚಿನ ವಿವರಗಳಿಗೆ ಹಾಗೂ ನೋಂದಣಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ ಸೊಸೈಟಿ, ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-22861423/22864189 ರ ಮೂಲಕ ಸಂಪರ್ಕಿಸಲು ಕೋರಿದೆ. **Email:-secybalbhavan.bng@gmail.com.**

## ರಾಜಸಭೆಗೆ ಬಿಜೆಪಿಯ ಕೆ.ಸಿ. ರಾಮಮೂರ್ತಿ ಅವಿರೋಧ ಆಯ್ಕೆ

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನಸಭೆಯ ಚುನಾಯಿತ ಸದಸ್ಯರಿಂದ ರಾಜ್ಯಸಭೆಗೆ ಒಬ್ಬ ಸದಸ್ಯರನ್ನು ಆಯ್ಕೆ ಮಾಡಲು ಉಪ ಚುನಾವಣೆಯನ್ನು ದಿನಾಂಕ: 12-12-2019 ರಂದು ನಿಗದಿಪಡಿಸಲಾಗಿತ್ತು.

ಡಿಸೆಂಬರ್ 5, 2019 ರಂದು ನಾಮಪತ್ರ ಹಿಂತೆಗೆದುಕೊಳ್ಳಲು ಅಂತಿಮ ದಿನವಾಗಿದ್ದು, ಭಾರತೀಯ ಜನತಾ ಪಾರ್ಟಿಯ ಅಭ್ಯರ್ಥಿಯಾದ ಶ್ರೀ ಕೆ.ಸಿ. ರಾಮಮೂರ್ತಿಯವರು ಮಾತ್ರ ಅಂತಿಮವಾಗಿ ಚುನಾವಣಾ ಕಣದಲ್ಲಿ ಉಳಿದಿದ್ದಾರೆ. ಆದ್ದರಿಂದ ಕೆ.ಸಿ ರಾಮಮೂರ್ತಿ, ಬಿಜೆಪಿ ಇವರು ರಾಜ್ಯಸಭೆಗೆ ನಡೆದ ಉಪ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿರುತ್ತಾರೆಂದು ಘೋಷಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಪ್ರಕಟಣೆ ತಿಳಿಸಿದೆ.

# <u>ಪ್ರಥಮ ಮತ್ತು ದ್ವಿತೀಯ ದರ್ಜೆ ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆ</u>

ಬೆಂಗಳೂರು, ಡಿಸೆಂಬರ್ 6 (ಕರ್ನಾಟಕ ವಾರ್ತೆ)

ಪ್ರಥಮ ಮತ್ತು ದ್ವಿತೀಯ ದರ್ಜೆ ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆಯನ್ನು 2020 ನೇ ಸಾಲಿನ ಮೊದಲನೇ ತ್ರೈಮಾಸಿಕದಲ್ಲಿ ನಡೆಸಲು ಬಾಯ್ಲರ್ ಅಟೆಂಡೆಂಟ್ ಪರೀಕ್ಷಾ ಮಂಡಳಿಯು ನಿರ್ಧರಿಸಿದೆ. ಸದರಿ ಪರೀಕ್ಷೆಗೆ ವಿವಿಧ ಜಿಲ್ಲೆಗಳಿಂದ ಬರುವ ಅರ್ಜಿಗಳ ಸಂಖ್ಯೆಗಳ ಆಧಾರದ ಮೇಲೆ ಪರೀಕ್ಷಾ ಸ್ಥಳ ಮತ್ತು ದಿನಾಂಕಗಳನ್ನು ನಿಗದಿಪಡಿಸಿ ಅಭ್ಯರ್ಥಿಗಳಿಗೆ ತಿಳಿಸಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಪರೀಕ್ಷೆಯ ಅರ್ಜಿ ಮತ್ತು ಅನುಬಂಧಗಳನ್ನು ಕಾರ್ಯದರ್ಶಿಗಳು, ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷಾ ಮಂಡಳಿ, ಕಲ್ಯಾಣ ಸುರಕ್ಷಾ ಭವನ, ನೆಲಮಹಡಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029 ಇಲ್ಲಿ ಸಲ್ಲಿಸಬಹುದಾಗಿದೆ.

ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿಧಾನ ಹಾಗೂ ಈ ಪರೀಕ್ಷೆಗೆ ಸಂಬಂದಿಸಿದ ಹೆಚ್ಚಿನ ವಿವರಗಳನ್ನು ಇಲಾಖೆಯ ವೆಬ್‌ಸೈಟ್ **www.karnataka.gov.in.esurakshate** ಅಥವಾ **FBIS-Homepage** ರಿಂದ ಪಡೆದುಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# <u>Boiler Attendent Examination</u>

**Bengaluru 6th December (Karnataka Information)**

The First and Second Grade Boiler Attendant Examinations Board has decided t conduct the next Boiler Attendant Examination at Bangalore in the year 2020. The exact date and place of the examination will be intimated letter to the candidates.

Interested candidates can submit applications along with annexure to Secretary , Boiler Operation Engineer's Board, 2nd Floor, Kalyana Suraksha Bhavana, Near Dairy Circle, Bannerghatta Road, Bengaluru – 560 029.

The candidates appearing for the said examination, may download the application form along with the instructions sheet from the official page in FBIS-Homepage or website www.karnataka.gov.in.esurakshate.